ಕರ್ನಾಟಕ ಸರ್ಕಾರ

ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ

DTE-ADMI 0 ACM1 15 2020

ಆಯುಕ್ತರ ಕಛೇರಿ,
ತಾಂತ್ರಿಕ ಶಿಕ್ಷಣ ಭವನ,
ಅರಮನೆ ರಸ್ತೆ,
ಬೆಂಗಳೂರು–560 001.
ದಿನಾಂಕ:21–11–2020.

–:: ಸುತ್ತೋಲೆ ::–

ವಿಷಯ: 2020–21 ನೇ ಸಾಲಿಗೆ ಲ್ಯಾಟರಲ್ ಎಂಟ್ರಿ ಸ್ಕೀಂ ಮೂಲಕ ನೇರವಾಗಿ 2ನೇ ವರ್ಷ/03ನೇ ಸೆಮಿಸ್ಟರ್ ಬಿ.ಇ ಗೆ ಡಿಪ್ಲೋಮಾಧಾರಕರುಗಳಿಂದ ಭರ್ತಿ ಮಾಡಲು ಕಳೆದ 2019–20ನೇ ಸಾಲಿನ ಪ್ರಥಮ ವರ್ಷದ ಬಿ.ಇ ಕೋರ್ಸಿನಲ್ಲಿ ಭರ್ತಿ ಆಗದೆ ಖಾಲಿ ಉಳಿದಿರುವ ಸೀಟುಗಳ ವಿವರಗಳನ್ನು ಸಲ್ಲಿಸುವ ಕುರಿತು.

ಉಲ್ಲೇಖ: ಸರ್ಕಾರದ ಆದೇಶ ಸಂ. 52 ಟಿಇಸಿ 2019, ದಿ:15–06–2019.

–000000–

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಸರ್ಕಾರದ ಆದೇಶದಲ್ಲಿನಂತೆ 2020–21ನೇ ಸಾಲಿಗೆ ರಾಜ್ಯದಲ್ಲಿನ ಸರ್ಕಾರಿ / ಅನುದಾನಿತ ಇಂಜಿನಿಯರಿಂಗ್ ಕಾಲೇಜುಗಳಲ್ಲಿನ ಅನುದಾನಿತ ಕೋರ್ಸುಗಳಿಗೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವತಿಯಿಂದ ಲ್ಯಾಟರಲ್ ಎಂಟ್ರಿ ಮೂಲಕ ಬಿ.ಇ 2ನೇ ವರ್ಷ/03ನೇ ಸೆಮಿಸ್ಟರ್‌ಗೆ ಡಿಪ್ಲೋಮಾಧಾರಕರುಗಳಿಂದ ಭರ್ತಿ ಮಾಡಲು ಕಳೆದ 2019–20ನೇ ಸಾಲಿನಲ್ಲಿ ಪ್ರಥಮ ವರ್ಷದ ಬಿ.ಇ ಕೋರ್ಸುಗಳ ಪ್ರವೇಶಾತಿ ಪ್ರಕ್ರಿಯೆ ಮುಗಿದ ನಂತರ ಭರ್ತಿ ಆಗದೆ ಖಾಲಿ ಉಳಿದಿರುವ ಸೀಟುಗಳ ವಿವರವನ್ನು ನೇರವಾಗಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಹಾಗೂ ಸರ್ಕಾರಕ್ಕೆ ಅಧ್ಯಾರ್ಪಣೆ ಮಾಡುವಂತೆ ಈ ಮೂಲಕ ಸೂಚಿಸಲಾಗಿದೆ. ತಪ್ಪಿದ್ದಲ್ಲಿ, ಸಂಸ್ಥೆಯ ಪ್ರಾಂಶುಪಾಲರುಗಳು ಈ ಸಂಬಂಧ ನೇರ ಜವಾಬ್ದಾರರಾಗಿರುತ್ತಾರೆ.

ಜಂಟಿ ನಿರ್ದೇಶಕರು(ಆಡಳಿತ)

ಇವರಿಗೆ,

*ರಾಜ್ಯದ ಸರ್ಕಾರಿ / ಅನುದಾನಿತ ಇಂಜಿನಿಯರಿಂಗ್ ಕಾಲೇಜುಗಳ ಪ್ರಾಂಶುಪಾಲರುಗಳಿಗೆ – ಸೂಕ್ತ ಮಾಹಿತಿಗಾಗಿ ಹಾಗೂ ಅನುಸರಣೆಗಾಗಿ.*

ಪ್ರತಿ:–

1. ಅಪರ ಕಾರ್ಯದರ್ಶಿಗಳು, ಮಾನ್ಯ ಉನ್ನತ ಶಿಕ್ಷಣ ಸಚಿವರು, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಅಧೀನ ಕಾರ್ಯದರ್ಶಿ, ಶಿಕ್ಷಣ ಇಲಾಖೆ(ಉನ್ನತ ಶಿಕ್ಷಣ), ಬೆಂಗಳೂರು.
3. ಕುಲಸಚಿವರು, ವಿಶ್ವೇಶ್ವರಾಯ ತಾಂತ್ರಿಕ ವಿಶ್ವವಿದ್ಯಾಲಯ, ಜ್ಞಾನ ಸಂಗಮ, ಬೆಳಗಾವಿ.
4. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ, ಬೆಂಗಳೂರು.

ಪ್ರತಿ ಮಾಹಿತಿಗಾಗಿ:–

1. ಮಾನ್ಯ ಆಯುಕ್ತರ ಆಪ್ತಶಾಖೆಗೆ.
2. ಮಾನ್ಯ ನಿರ್ದೇಶಕರ ಆಪ್ತಶಾಖೆಗೆ.
3. ಮಾನ್ಯ ಜಂಟಿ ನಿರ್ದೇಶಕರು(ಆಡಳಿತ) ಆಪ್ತಶಾಖೆಗೆ.
4. ಇ-ಗವರ್ನೆನ್ಸ್ ವಿಭಾಗಕ್ಕೆ – ಸದರಿ ಸುತ್ತೋಲೆಯನ್ನು ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದು.
5. ಕಛೇರಿ ಪ್ರತಿ.